ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 472
2. ಸದಸ್ಯರ ಹೆಸರು : ಶ್ರೀಮತಿ ಎಸ್. ವೀಣಾ ಅಚ್ಚಯ್ಯ
3. ಉತ್ತರಿಸಬೇಕಾದ ದಿನಾಂಕ : 10-12-2020
4. ಉತ್ತರಿಸುವ ಸಚಿವರು : ಮಾನ್ಯ ಜಲಸಂಪನ್ಮೂಲ ಸಚಿವರು

ಕ್ರ ಸಂ	ಪ್ರಶ್ನೆಗಳು	ಉತ್ತರಗಳು
ಅ	ಕೊಡಗು ಜಿಲ್ಲೆಯ ಹಲವಾರು ನದಿಗಳಲ್ಲಿ ಸಾಕಷ್ಟು ಹೂಳು ತುಂಬಿದ್ದು, ಅದನ್ನು ತೆಗೆಯಲು ಸರ್ಕಾರ ಕ್ರಮ ಕೈಗೊಂಡಿದೆಯೇ;	ಹೌದು.
ಆ	ಕ್ರಮ ಕೈಗೊಂಡಿದ್ದಲ್ಲಿ, ಸದರಿ ಕಾಮಗಾರಿಗೆ ಈಗಾಗಲೇ ಎಷ್ಟು ಅನುದಾನ ಒದಗಿಸಲಾಗಿದೆ;	1. ಹಾರಂಗಿ ಜಲಾನಯನ ಪ್ರದೇಶ ಮತ್ತು ನದಿ ಪಾತ್ರದ ಪುನಶ್ಚೇತನ ಹಾಗೂ ರಕ್ಷಣಾ ಕಾಮಗಾರಿಯ ರೂ.130.00 ಕೋಟಿ ಮೊತ್ತದ ಅಂದಾಜಿಗೆ ದಿನಾಂಕ:19-11-2020 ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಮುಂದಿನ ಕ್ರಮ ಕೈಗೊಳ್ಳಲಾಗುತ್ತಿದೆ. 2. ಕಾವೇರಿ ಹಾಗೂ ಕನ್ನಿಕೆ ನದಿಗಳಲ್ಲಿ ಗಿಡ-ಗಂಟೆಗಳನ್ನು ತೆರವುಗೊಳಿಸಲು ದಿನಾಂಕ:10-02-2020 ರಲ್ಲಿ ರೂ.1.90 ಕೋಟಿ ಮೊತ್ತದ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಕಾವೇರಿ ನೀರಾವರಿ ನಿಗಮ ವತಿಯಿಂದ ಕಾಮಗಾರಿಯನ್ನು ಕೈಗೊಂಡು ಪೂರ್ಣಗೊಳಿಸಲಾಗಿರುತ್ತದೆ. 3. ಕೊಪ್ಪ ಸೇತುವೆ ಹಾಗೂ ತಪೋವನ ಹತ್ತಿರ ಕಾವೇರಿ ಹೊಳೆಯಲ್ಲಿ ತುಂಬಿರುವ ಹೂಳನ್ನು ಮತ್ತು ಗಿಡಗಂಟೆ ತೆಗೆಯಲು 2019-20ನೇ ಸಾಲಿನಲ್ಲಿ ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ ರವರ ಎನ್.ಡಿ.ಆರ್.ಎಫ್ ಲೆಕ್ಕ ಶೀರ್ಷಿಕೆಯಡಿ ರೂ.88.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ.
ಇ	ಪ್ರಸಕ್ತ ಆರ್ಥಿಕ ವರ್ಷದಲ್ಲಿ ಮಂಜೂರಾದ ಹಾಗೂ ಬಿಡುಗಡೆಯಾಗಿರುವ ಮತ್ತು ವಿನಿಯೋಗಿಸಿರುವ ಅನುದಾನ ಎಷ್ಟು; (ಸಂಪೂರ್ಣ ವಿವರಗಳನ್ನು ನೀಡುವುದು)	
ಈ	ಸದರಿ ಅನುದಾನದಲ್ಲಿ ಇದೂವರೆವಿಗೂ ಕೈಗೊಂಡಿರುವ ಕಾಮಗಾರಿಗಳಾವುವು? (ಪ್ರಗತಿಯ ಸಂಪೂರ್ಣ ವಿವರಗಳನ್ನು ನೀಡುವುದು)	

ಸಂಖ್ಯೆ:ಜಸಂಇ 160 ಎಲ್ಎಲ್ಎ 2020

(ರಮೇಶ್ ಲ. ಜಾರಕಿಹೊಳಿ)
ಜಲಸಂಪನ್ಮೂಲ ಸಚಿವರು